ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಅತಿಥಿ ಉಪನ್ಯಾಸಕರ ಸೇವಾ ಭದ್ರತೆ ಕುರಿತು

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ):-

527(699) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಅತಿಥಿ ಉಪನ್ಯಾಸಕರ ಸೇವಾ ಭದ್ರತೆಗೆ ಸಂಬಂಧಿಸಿದಂತೆ ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ 7 ಜನ ತಜ್ಞರ ಸಮಿತಿಯನ್ನು ರಚಿಸಿರುವ ವಿಚಾರ ಸರ್ಕಾರದ ಯಾವ ಹಂತದಲ್ಲಿದೆ ;

(ಆ) ಅತಿಥಿ ಉಪನ್ಯಾಸಕರಿಗೆ ಸೇವಾ ಭದ್ರತೆ ನೀಡುವ ಬಗ್ಗೆ ಸರ್ಕಾರದ ನಿಲುವೇನು ;

(ಇ) ಯಾವ ಕಾಲಮಿತಿಯೊಳಗೆ ಕ್ರಮ ತೆಗೆದುಕೊಳ್ಳಲಾಗುವುದು?